ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಉತ್ತರ ಕನ್ನಡ ಜಿಲ್ಲೆ, ಕುಮಟಾ ತಾಲ್ಲೂಕಿನ ಗೋಕರ್ಣ ಮತ್ತು ಇತರೆ 7 ಗ್ರಾಮಗಳ ಬಹುಗಾಮ ಕುಡಿಯುವ ನೀರು ಸರಬರಾಜು ಯೋಜನೆಯ ವಿತರಣಾ ವ್ಯವಸ್ಥೆ ಹಾಗೂ ಎಕ್ಸ್‌ಪ್ರೆಸ್ ಫೀಡರ್‌ಲೈನ್ ಕಾಮಗಾರಿಯ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: 1. ದಿನಾಂಕ:16.10.2016ರ ರಾಜ್ಯ ತಾಂತ್ರಿಕ ಸಮಿತಿ (STA)ಸಭೆಯ ನಡವಳಿಗಳು.

2. ಮುಖ್ಯ ಇಂಜಿನಿಯರ್, RDWSD, ರವರ ಕಡತ ಸಂ:ಗ್ರಾಅಪ 190 ಗ್ರಾಕುನೀ&ನೈಇ 2017-18.

--

**ಪೀಠಿಕೆ:**

ಗೋಕರ್ಣ ಹಾಗೂ ಇತರೆ 7 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆಯನ್ನು ರೂ.446.00ಲಕ್ಷ ಅಂದಾಜು ಪಟ್ಟಿಗೆ ಸರ್ಕಾರದ ಆದೇಶ ಸಂ:ಗ್ರಾಅಪ 421 ಗ್ರಾನೀಸ(2)97 ದಿನಾಂಕ:19.02.2001ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಸದರಿ ಯೋಜನೆಯು 2014-15ರಲ್ಲಿ ಪೂರ್ಣಗೊಂಡಿದೆ. ಪರಿಷ್ಕೃತ ಅಂದಾಜಿನಲ್ಲಿ ವಿತರಣಾ ವ್ಯವಸ್ಥೆಗೆ, ಫೀಡರ್ ಲೈನ್ ಸ್ಥಾಪನೆಗೆ ಹಾಗೂ ಇತರೆ ಅವಶ್ಯಕ ಕಾಮಗಾರಿಗಳ ಅನುಷ್ಠಾನಕ್ಕಾಗಿ ಅವಕಾಶ ಕಲ್ಪಿಸಿದ್ದು, ಈ ಕಾರಣದಿಂದ ಮೂಲ ಅಂದಾಜು ಮೊತ್ತಕ್ಕಿಂತ ಹೆಚ್ಚುವರಿ ಮೊತ್ತ ಅವಶ್ಯಕತೆಯಿದ್ದು, ಅದಕ್ಕಾಗಿ **ರೂ.2450.00ಲಕ್ಷ**ಗಳ ಪರಿಷ್ಕೃತ ಅಂದಾಜು ಮೊತ್ತದಲ್ಲಿ ಅನುಷ್ಠಾನಗೊಳಿಸಲು ಮೇಲೆ(2)ರಲ್ಲಿ ಓದಲಾದ ಕಡತದಲ್ಲಿ CE, RDWSD ರವರು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಪ್ರಸ್ತಾವನೆ ಸಲ್ಲಿಸಿದ್ದಾರೆ. ಕಾರವಾರ ಜಿಲ್ಲಾ ಪಂಚಾಯತ್ ಹಾಗೂ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರು ನಿಯಮಾನುಸಾರ ಮುಂದಿನ ಪ್ರಕ್ರಿಯೆ ಅನುಸರಿಸಲನುವಾಗುವಂತೆ NRDWP ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಲು ಉದ್ದೇಶಿಸಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 79·ಗ್ರಾನೀಸ(5)2017 ಬೆಂಗಳೂರು, ದಿನಾಂಕ:05.12.2017.**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಉತ್ತರ ಕನ್ನಡ ಜಿಲ್ಲೆ, ಕುಮಟಾ ತಾಲ್ಲೂಕಿನ ಗೋಕರ್ಣ ಮತ್ತು ಇತರೆ 7 ಗ್ರಾಮಗಳ ಬಹುಗಾಮ ಕುಡಿಯುವ ನೀರು ಸರಬರಾಜು ಯೋಜನೆಯ ವಿತರಣಾ ವ್ಯವಸ್ಥೆ ಹಾಗೂ ಎಕ್ಸ್‌ಪ್ರೆಸ್ ಫೀಡರ್‌ಲೈನ್ ಕಾಮಗಾರಿಯ ಸಲುವಾಗಿ ಕುಡಿಯುವ ನೀರು ಸರಬರಾಜು ಯೋಜನೆ ಪರಿಷ್ಕೃತ **ರೂ.2450.00ಲಕ್ಷ(ಎರಡು ಸಾವಿರದ ನಾಲ್ಕು ನೂರ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಗಳ** ಅಂದಾಜಿನಲ್ಲಿ ಅನುಷ್ಠಾನಗೊಳಿಸಲು NRDWP ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ

2. ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.

(ಅ) ಅನುಮೋದಿತ ಕುಡಿಯುವ ನೀರಿನ ಕಾರ್ಯಕ್ರಮದ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

(ಆ) ಗುತ್ತಿಗೆದಾರರು ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು.

PD-2

20/12/17

2248

(ಇ) ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/RDWSD ದೃಡೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. 2017-18ರ ಸಾಲಿನಲ್ಲಿ IMISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಯನ್ನು ಅನುಷ್ಠಾನಗೊಳಿಸಬೇಕು.

(ಈ) ಯೋಜನಾ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯಿದೆಯನ್ವಯ) ನೀತಿಯನ್ವಯವೇ ಮಾಡತಕ್ಕದ್ದು ಮತ್ತು ಯೋಜನೆಯ ಅನುಷ್ಠಾನವನ್ನು ಕಡ್ಡಾಯವಾಗಿ ಸರ್ಕಾರದಿಂದ ಅನುಮೋದನೆಯಾಗಿರುವ ಸಂಸ್ಥೆ ಮೂಲಕ 3rd Party Inspectionಗೆ ಒಳಪಡಿಸುವುದು.

(ಉ) ಈ ಯೋಜನೆಗೆ ತಗಲುವ ಅನುಮೋದಿತ ಅಂದಾಜು ವೆಚ್ಚದ ವ್ಯಾಪ್ತಿಯೊಳಗೆ ಗುತ್ತಿಗೆ ನೀಡಿದ 15 ತಿಂಗಳೊಳಗಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಯೋಜನೆಯನ್ನು ಕಾರ್ಯಗತಗೊಳಿಸತಕ್ಕದ್ದು. ಈಗ ಅನುಮೋದನೆಯಾದ ಕ್ರಿಯಾ ಯೋಜನೆಯ ಅಂದಾಜು ವೆಚ್ಚದಲ್ಲಿ ಹೆಚ್ಚಳವಾಗದಂತೆ ಎಲ್ಲಾ ಆಡಳಿತಾತ್ಮಕ ಹಾಗೂ ತಾಂತ್ರಿಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

ಊ) Bulk Water meter ಹಾಗೂ House hold metering ವ್ಯವಸ್ಥೆಯನ್ನು MVS ಯೋಜನೆಯಿರುವೆಡೆ ಕಡ್ಡಾಯವಾಗಿ ಮಾಡಬೇಕು. ಆಯಾ ಗ್ರಾಮ ಪಂಚಾಯತಿ ಸದರಿ ಆಧಾರದ ಮೇಲೆ ಹೊರಗುತ್ತಿಗೆ ಸಂಸ್ಥೆಗೆ/ಸರ್ಕಾರಕ್ಕೆ ನೀರು ಬಳಕೆ ಆಧಾರದ ಮೇಲೆ ನೀರಿನ ಕರ ಪಾವತಿಸಬೇಕು.

(ಋ) ಯೋಜನೆ ಅನುಷ್ಠಾನಗೊಂಡ ನಂತರ ಅದರ ಕಾರ್ಯಾಚರಣೆ ಮತ್ತು ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾಡಿಸಬೇಕು ಹಾಗೂ ಗ್ರಾಮಗಳ ಆಂತರಿಕ ಸರಬರಾಜು ವ್ಯವಸ್ಥೆಯನ್ನು ಸ್ಥಳೀಯ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ (VWSSC) / ಸಂಬಂಧಿಸಿದ ಗ್ರಾಮ ಪಂಚಾಯತ್ / ಪಾರದರ್ಶಕ ನೀತಿಯನ್ವಯ ಆಯ್ಕೆ ಮಾಡಿದ ಸರ್ಕಾರೇತರ ಸಂಸ್ಥೆ / ಸಂಬಂಧಪಟ್ಟ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಮುಖೇನ ನಡೆಸಲು ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು.

(ಎ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

3. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 532 ವೆಚ್ಚ-6 2017 ದಿನಾಂಕ:05.12.2017ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಆಯುಕ್ತರು ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.

4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ ಬೆಂಗಳೂರು
7. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
8. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
9. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ.
10. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕಾವೇರಿಭವನ, ಬೆಂಗಳೂರು-09.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (KUWSDB) ನಂ.5 ಮತ್ತು 6, ಜಲಭವನ, ಬಿಟಿಎಂ ಲೇಔಟ್, 1ನೇ ಘಟ್ಟ, 1ನೇ ಹಂತ, ಬನ್ನೇರುಘಟ್ಟ ಮುಖ್ಯ ರಸ್ತೆ, ಬೆಂಗಳೂರು-29.
12. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ.
13. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಬೆಳಗಾವಿ.
14. ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಉತ್ತರ ಕನ್ನಡ.
15. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
16. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
17. ಮುಖ್ಯ ಲೆಕ್ಕಾಧಿಕಾರಿಗಳು, RDWSD, ಕಾವೇರಿಭವನ, ಬೆಂಗಳೂರು-09.
18. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.
19. ಆಯುಕ್ತರು, RDWSD ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ / ಆಂತರಿಕ ಆರ್ಥಿಕ ಸಲಹೆಗಾರರು ಇವರುಗಳ ಆಪ್ತ ಸಹಾಯಕರು.
20. ಉಪ ನಿರ್ದೇಶಕರು, Network Management Centre (TNMC), ನಂ.49, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
21. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB ಬ್ರ್ಯಾಂಚ್, ರಾಜದೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.
22. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
23. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
24. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
25. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
26. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿಗಳು.